**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1220/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಪುಟ್ಟೇಗೌಡ ಜಿ.ಕೆ. | ಪ್ರಾಸಾ-2 |
| ತಂದೆಯ ಹೆಸರು | : ಕೆಂಚೇಗೌಡ | ಚಾಸಾ-14 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಹೆಚ್.ಸಿ. | ದಿನಾಂಕಃ27.01.2026. |
| ವಾಸಸ್ಥಳ | : ಮೂಡಿಗೆರೆ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನಾನು ಕಳೆದ ನಾಲ್ಕು ವರ್ಷಗಳಿಂದ ಮೂಡಿಗೆರೆ ಪೋಲಿಸ್ ಠಾಣೆಯಲ್ಲಿ ಹೆಚ್.ಸಿ ಆಗಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

ದಿ.27.05.2024 ರಂದು ನಾನು ಠಾಣಾ SHO ಕರ್ತವ್ಯದಲ್ಲಿ ಇದ್ದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ಕೊಟ್ಟ ದೂರನ್ನು ಸ್ವೀಕರಿಸಿಕೊಂಡು ಠಾ.ಮೊ.ಸಂ.10/2024 ಕಲಂ 447, 454, 380 ರ ಐಪಿಸಿ ರಂತೆ ಪ್ರ.ವ.ವರದಿ ದಾಖಲಿಸಿ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-15 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-2 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಎಂ.ಆರ್. ವಕೀಲರಿಂದಃ**

ಅಂಬೇಡ್ಕರ್ ನಗರವು ನಮ್ಮ ಠಾಣೆಯಿಂದ 2 ಕೀ.ಮೀ. ಅಂತರವಿರುತ್ತದೆ ಎಂದರೆ ಸಾಕ್ಷಿಯು 3 ಕೀ.ಮಿ. ಅಂತರವಿರುತ್ತದೆ ಎಂದು ನುಡಿಯುತ್ತಾರೆ. ಅಂಬೇಡ್ಕರ್ ನಗರದಲ್ಲಿ ಆಟೋ ಮತ್ತು ಇತರ ಖಾಸಗಿ ವಾಹನಗಳ ಸಂಚಾರವಿರುತ್ತದೆ ಎಂದರೆ ಸರಿ. ಚಾಸಾ-1 ರವರು ದಿ.27.05.2024 ರಂದು ನಿಪಿ-1 ರಂತೆ ದೂರನ್ನು ದಾಖಲಿಸಿರುತ್ತಾರೆ ಎಂದರೆ ಸರಿ. ಚಾಸಾ-1 ರವರು ಹೇಳಿದ ಘಟನೆಯ ದಿನಾಂಕ ನನಗೆ ನೆನಪಿರುವುದಿಲ್ಲ. ನಿಪಿ-2 ನ್ನು ದಾಖಲಿಸುವ ಪೂರ್ವದಲ್ಲಿ ಚಾಸಾ-1 ರವರು ಹೇಳಿದಂತೆ ಕಳವು ಆಗಿರುವ ಚಿನ್ನಾಭರಣಗಳ ರಶೀದಿಯನ್ನು ಪರಿಶೀಲಿಸಿರುವುದಿಲ್ಲ. ಅದೇ ರೀತಿಯಾಗಿ ಕಳುವು ಆಗಿರುವ ನಗದಿನ ಮುಖಬೆಲೆಯನ್ನು ತಿಳಿಸಿರುವುದಿಲ್ಲ. ನಿಪಿ-2 ನ್ನು ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಠಾಣೆಯಲ್ಲಿಯೇ ತಯಾರಿಸಲಾಗಿರುತ್ತದೆ ಎಂದರೆ ಸರಿಯಲ್ಲ. ನಿಪಿ-2 ಕ್ಕೂ, ಆರೋಪಿಗೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-2 ನ್ನು ಇಲಾಖೆಯ ಅಂಕಿ ಅಂಶಕ್ಕೊಸ್ಕರ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು

ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.